ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಹೆದ್ದಾರಿ ರಸ್ತೆಗಳ ಅಗಲೀಕರಣ ಬಗ್ಗೆ.

ಶ್ರೀ ಹೆಚ್.ಎಂ. ರಮೇಶ್‌ಗೌಡ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು):-

216 (258) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಾದ್ಯಂತ ಬೃಹತ್ ಹೆದ್ದಾರಿಗಳ ನಿರ್ಮಾಣಕ್ಕಾಗಿ ಹಾಗೂ ಎಕ್ಸ್ ಪ್ರೆಸ್ ಕಾರಿಡಾರ್ ನಿರ್ಮಾಣಕ್ಕಾಗಿ ಹಾಲಿ ಇರುವ ರಸ್ತೆಗಳನ್ನು ಅಗೆದು ಹಾಕಲಾಗಿದ್ದು, ಕಾಮಗಾರಿ ನಿಧಾನಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ ಶೀಘ್ರವಾಗಿ ರಸ್ತೆ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಕಳೆದ ಎರಡು ವರ್ಷಗಳಿಂದ ಬೆಂಗಳೂರು-ಮಂಗಳೂರು ಹೆದ್ದಾರಿಯಲ್ಲಿ ಹಾಸನದಿಂದ ಸಕಲೇಶಪುರ ಮಾರ್ಗ ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ; ಈ ಎರಡೂ ಯೋಜನೆಗಳನ್ನು ಪೂರ್ಣಗೊಳಿಸಲು ಅಂತಿಮ ಕಾಲಮಿತಿ ನಿಗದಿ ಪಡಿಸಲಾಗಿದೆಯೇ? (ಮಾಹಿತಿ ನೀಡುವುದು)